# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಯೋಜನೆಗಳನ್ನು 2022-23ನೇ ಸಾಲಿನಲ್ಲಿ ಮುಂದುವರೆಸುವ ಬಗ್ಗೆ.

ಓದಲಾಗಿದೆ:- 1. ಆಯುಕ್ತರು, ಹಿಂವಕ ಇವರ ಪ್ರಸ್ತಾವನೆ ಸಂಖ್ಯೆ: ಹಿಂವಕ/ಸಮನ್ವಯ-ಇತರೆ/ಸಿಆರ್-2/2021-22

2. ಆರ್ಥಿಕ ಇಲಾಖೆಯ ಸಲಹಾ ಟಿಪ್ಪಣಿ ಸಂಖ್ಯೆ: ಆಇ 01 ವೆಚ್ಚ-3/2022, ದಿನಾಂಕ:04. 04. 2022.

******

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ ಆಯುಕ್ತರು, ಹಿಂವಕ ಇವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ರಾಜ್ಯವಲಯ ಮತ್ತು ಜಿಲ್ಲಾವಲಯ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಿಂದಿನ ಸಾಲುಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಸದರಿ ಯೋಜನೆಗಳನ್ನು 2022-23ನೇ ಸಾಲಿನ ಅಯವ್ಯಯಕ್ಕೆ ಅನುಗುಣವಾಗಿ ಅನುಷ್ಠಾನಗೊಳಿಸುವ ಅವಶ್ಯಕತೆಯಿರುತ್ತದೆ ಹಾಗೂ ಅವುಗಳ ಅಡಿಯಲ್ಲಿ ಬರುವ ಹುದ್ದೆಗಳನ್ನು 2022-23ನೇ ಸಾಲಿಗೆ ಮುಂದುವರೆಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

| | ಕಾರ್ಯಕ್ರಮಗಳ ವಿವರ | ಯೋಜನಾ ಕಾರ್ಯಕ್ರಮವು ಯಾವ ವರ್ಷದಿಂದ ಜಾರಿಗೆ ಬಂದಿದೆ ಹಾಗೂ ಯಾವ ಆದೇಶದಲ್ಲಿ ಮುಂದುವರೆಸಲಾಗಿದೆ | 2022-23ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯ (ರೂ.ಲಕ್ಷಗಳಲ್ಲಿ) | 2022-23 ನೇ ಸಾಲಿನಲ್ಲಿ ಈ ಯೋಜನೆಯನ್ನು ಮುಂದುವರೆಸಬೇಕಾದ ಅವಶ್ಯಕತೆ |
|---|---|---|---|---|
| 1 | 2 | 3 | 5 | 6 |
| | | ರಾಜ್ಯವಲಯ ಕಾರ್ಯಕ್ರಮಗಳು | | |
| 1. | ನಿರ್ದೇಶನ ಮತ್ತು ಆಡಳಿತ 2225-03-001-0-01 | | 1137.00 | ಆಯುಕ್ತರ ಕಛೇರಿಯ ಸಿಬ್ಬಂದಿ ಮತ್ತು ಕಛೇರಿ ನಿರ್ವಹಣೆ ವೆಚ್ಚಕ್ಕಾಗಿ ಕಾರ್ಯಕ್ರಮ ವನ್ನು ಮುಂದುವರೆಸುವ ಅವಶ್ಯಕತೆ ಇರುತ್ತದೆ. |
| 2 | ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಹೊಸ ವಿದ್ಯಾರ್ಥಿ ನಿಲಯಗಳ ಪ್ರಾರಂಭ ಮತ್ತು ನಿರ್ವಹಣೆ2225-03-277-2-53 | 2005-06 | 12483.87 | ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ವಸತಿ ನಿಲಯಗಳ ಪ್ರವೇಶಕ್ಕೆ ಹೆಚ್ಚಿನ ಬೇಡಿಕೆ ಇದೆ. ಹೊಸ ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭ ಮಾಡಲು ಈ ಕಾರ್ಯಕ್ರಮವನ್ನು ಮುಂದು ವರೆಸುವ ಅವಶ್ಯಕತೆ ಇದೆ. |

4/5/22

| | | | | |
|---|---|---|---|---|
| 3 | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ- ತಾಲ್ಲೂಕು ಕಛೇರಿ2225-03-277-3-11 | 2013-14 | 3440.93 | 2013-14ನೇ ಸಾಲಿನಲ್ಲಿ ತಾಲ್ಲೂಕುಗಳಲ್ಲಿ ಹೊಸದಾಗಿ ತಾಲ್ಲೂಕು ಕಛೇರಿಗಳನ್ನು ಪ್ರಾರಂಭಿಸಲು ಸರ್ಕಾರ ಆದೇಶ ಹೊರಡಿಸಿರುತ್ತದೆ. ಇವುಗಳನ್ನು ನಿರ್ವಹಿಸಲು ಈ ಕಾರ್ಯಕ್ರಮವನ್ನು ಮುಂದುವರೆಸುವ ಅವಶ್ಯಕತೆ ಇರುತ್ತದೆ. |
| 4 | ಹಿಂದುಳಿದ ವರ್ಗದವರಿಗೆ ಹೊಸ ಮೊರಾರ್ಜಿ ದೇಸಾಯಿ ನಿವಾಸಿ ಶಾಲೆಗಳ ಪ್ರಾರಂಭ ಮತ್ತು ನಿರ್ವಹಣೆ (ಕ.ವ.ಶಿ.ಸಂ.ಸಂಘ) 2225-03-277-2-62 | 2006-07 | 15800.00 | 2009-10ನೇ ಸಾಲಿಗೆ ಹೊಸದಾಗಿ ಪ್ರಾರಂಭ ಮಾಡಲಾದ ಮೊರಾರ್ಜಿ ದೇಸಾಯಿ ವಸತಿ ಕಾಲೇಜುಗಳನ್ನು ನಿರ್ವಹಿಸಲು ಹಾಗೂ ಪ್ರತಿಭಾವಂತ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ 167 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಇವುಗಳ ನಿರ್ವಹಣೆಗಾಗಿ ಈ ಕಾರ್ಯಕ್ರಮವನ್ನು ಮುಂದುವರೆಸುವ ಅವಶ್ಯಕತೆ ಇರುತ್ತದೆ. |
| 5 | ದೇವರಾಜ ಅರಸು ಸಂಶೋಧನಾ ಸಂಸ್ಥೆ ಹಾಗೂ ಇತರೆ ಕಾರ್ಯಕ್ರಮಗಳು 2225-03-277-2-08 | 1997-98 | 149.00 | ದೇವರಾಜ ಅರಸುರವರ ಪುಣ್ಯತಿಥಿ ಹಾಗೂ ಜನ್ಮ ದಿನಾಚರಣೆಗೆ ತಗಲುವ ವೆಚ್ಚವನ್ನು ಈ ಲೆಕ್ಕ ಶೀರ್ಷಿಕೆಯಡಿ ಒದಗಿಸಿರುವ ಅನುದಾನದಲ್ಲಿ ಭರಿಸಲಾಗುತ್ತದೆ ಹಾಗೂ ದೇವರಾಜ ಅರಸು ಸಂ.ಸಂಸ್ಥೆಯ ಸಿಬ್ಬಂದಿಗಳ ವೇತನ ಪಾವತಿ ಮಾಡಲು ಈ ಕಾರ್ಯಕ್ರಮವನ್ನು ಮುಂದುವರೆಸುವ ಅವಶ್ಯಕತೆ ಇರುತ್ತದೆ. |
| 6 | ಆಹಾರ ಮತ್ತು ವಸತಿ ಸಹಾಯ - ವಿದ್ಯಾಸಿರಿ2225-03-283-0-03 | 2013-14 | 15000.00 | 2013-14ನೇ ಸಾಲಿನಿಂದ ಈ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲಾಗುತ್ತಿದ್ದು, ವಿದ್ಯಾರ್ಥಿ ನಿಲಯ ಗಳಲ್ಲಿ ಪ್ರವೇಶ ದೊರೆಯದ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿ ಗಳಿಗೆ "ವಿದ್ಯಾಸಿರಿ ಊಟ-ವಸತಿ ಯೋಜನೆ" ಯನ್ನು ಮಂಜೂರು ಮಾಡಲು ಈ ಕಾರ್ಯಕ್ರಮವನ್ನು ಮುಂದುವರೆಸುವ ಅವಶ್ಯಕತೆ ಇರುತ್ತದೆ. |
| 7 | ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿ ಗಾಗಿ ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನ 2225-03-277-2-51 | 2005-06 | 6508.00 | ಕೇಂದ್ರ ಸರ್ಕಾರದ ಶೇ.100 ರಷ್ಟು ಅನುದಾನವನ್ನು ಪಡೆದು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಗ್ರೂಪ್ ಎ ಕೋರ್ಸುಗಳಿಗೆ ಶುಲ್ಕವಿನಾಯಿತಿ ನೀಡಲು ಹಾಗೂ ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನ ನೀಡಲು ಈ ಕಾರ್ಯಕ್ರಮವನ್ನು ಮುಂದುವರೆಸುವ ಅವಶ್ಯಕತೆ ಇರುತ್ತದೆ |

4/5/22

| | | | | |
|---|---|---|---|---|
| 8 | ಕೇ.ಪು.ಯೋ- ಹಿಂದುಳಿದ ಪಾಲು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಮೆಟ್ರಿಕ್- ಪೂರ್ವ ವಿದ್ಯಾರ್ಥಿ ವೇತನ2225-03-277-2-52 | 2005-06 | 1250.00 | ಕೇಂದ್ರ ಸರ್ಕಾರದ ಅನುದಾನವನ್ನು ಪಡೆದು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲು ಈ ಕಾರ್ಯಕ್ರಮವನ್ನು ಮುಂದುವರೆಸುವ ಅವಶ್ಯಕತೆ ಇರುತ್ತದೆ. |
| 9 | ತರಬೇತಿ, ಅರಿವು ಮತ್ತು ಪ್ರೋತ್ಸಾಹ - ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಕಾರ್ಯಕ್ರಮ 2225-03-277-2-37 | 2005-06 | 3000.00 | ಐ.ಎ.ಎಸ್/ಐ.ಪಿ.ಎಸ್, ಕೆ.ಎ.ಎಸ್. ಬ್ಯಾಂಕಿಂಗ್, ಆರ್.ಆರ್.ಬಿ ಮತ್ತು ಎಸ್.ಎಸ್.ಸಿ ಮುಂತಾದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹಾಜರಾಗುವ ಹಿಂದುಳಿದ ವರ್ಗಗಳ ಅಭ್ಯರ್ಥಿಗಳಿಗೆ ತರಬೇತಿ ನೀಡುವ ಸಲುವಾಗಿ ಹಾಗೂ ಹಿಂದುಳಿದ ವರ್ಗಗಳ ವಿದ್ಯಾವಂತರಿಗೆ ವಿವಿಧ ವೃತ್ತಿಪರ ಕೋರ್ಸುಗಳಲ್ಲಿ ತರಬೇತಿ ನೀಡಿ ಆರ್ಥಿಕವಾಗಿ ಸ್ವಾವಲಂಬಿಗಳಾಗಲು ನೆರವಾಗಲು, ನರ್ಸಿಂಗ್ ವಿದ್ಯಾರ್ಥಿಗಳಿಗೆ ತರಬೇತಿ ವೆಚ್ಚ ಹಾಗೂ ಕೋರ್ಸು ವೆಚ್ಚ ಪಾವತಿಸಲು ಮತ್ತು ಹೊಸ ಕಾರ್ಯಕ್ರಮಗಳಾದ ದೇವರಾಜ ಅರಸು ವಿದೇಶಿ ವಿದ್ಯಾರ್ಥಿ ವೇತನ, ಎಸ್ ಎಸ್ ಎಲ್ ಸಿ, ಪಿ.ಯು.ಸಿ, ಪದವಿ, ಸ್ನಾತಕೋತ್ತರ ಪದವಿಯಲ್ಲಿ ಶೇ ೬೦ ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ದೇವರಾಜ ಅರಸು ಪ್ರತಿಭಾ ಪುರಸ್ಕಾರ, ಪೂರ್ಣಾವಧಿ ಪಿ.ಹೆಚ್.ಡಿ ವ್ಯಾಸಂಗದಲ್ಲಿ ತೊಡಗುವ ವಿದ್ಯಾರ್ಥಿ ಗಳಿಗೆ ಮಾಸಿಕ ಶಿಷ್ಯವೇತನ, ವಿದ್ಯಾರ್ಥಿ ನಿಲಯ ಗಳಲ್ಲಿ ಓಬಿಸಿ ಸೆಲ್ ಬಲವರ್ಧನೆ, ಸವಿತಾ ಸಮಾಜದ ಪಾರಂಪರೀಕ ಕಲೆಗಳಾದ ನಾದಸ್ವರ/ಡೋಲು ಸಂಗೀತ ಕಲೆಗಳ ಪುನಶ್ಚೇತನ ತರಬೇತಿ ಕಾರ್ಯಕ್ರಮ. IIT/IIM/IISc ರಾಷ್ಟ್ರೀಯ ಉನ್ನತ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ, ಎಇಇ, ಓಇಇಖಿ ಪರೀಕ್ಷಾ ಪೂರ್ವ ತರಬೇತಿ ಹಾಗೂ ಸೇನೆಗೆ ಸೇರಬಯಸುವ ಹಿಂದುಳಿದ ವರ್ಗಗದ ಅಭ್ಯರ್ಥಿಗಳಿಗೆ ಸೇನಾ ಆಯ್ಕೆ ಪೂರ್ವ ತರಬೇತಿ ಇತ್ಯಾದಿ ಕಾರ್ಯಕ್ರಮಗಳನ್ನು ಅನುಷ್ಠಾನ ಗೊಳಿಸಲು ಈ ಕಾರ್ಯಕ್ರಮವನ್ನು ಮುಂದುವರೆಸುವ ಅವಶ್ಯಕತೆ ಇರುತ್ತದೆ. |

[handwritten initials] 4/5/22